## ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂರವರ ನ್ಯಾಯಾಲಯ, ಪೊನ್ನಂಪೇಟೆ.

**ಸಿ.ಸಿ.ನಂ.57/2026**

**ಪಿರ್ಯಾದಿ** : ರಾಜ್ಯ ಸರ್ಕಾರ,
ಗೋಣಿಕೊಪ್ಪ ಪೋಲೀಸ್ ಠಾಣೆ.

**ವಿರುದ್ದ**

**ಆರೋಪಿ** : ಶ್ರೀ ಜಯಕುಮಾರ್,
ತಂದೆಃ ಶಿವದಾಸ,
ಪ್ರಾಯ 43 ವರ್ಷ
ವಾಸಃ ಎಡತೊರೆ, ತಿತಿಮತಿ,
ಪೊನ್ನಂಪೇಟೆ ತಾಲ್ಲುಕು, ಕೊಡಗು.

**ಆರೋಪಣೆ**

ಶ್ರೀ ಶ್ರೀನಾಥ್ ಎ,. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ

ದಿನಾಂಕ 13.11.2025 ರಂದು ಸಮಯ ರಾತ್ರಿ 9.45 ಗಂಟೆಗೆ ಗೋಣಿಕೊಪ್ಪ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ನೊಕ್ಯಾ ಗ್ರಾಮದ ತಿತಿಮತಿ ಪೋಲೀಸ್ ಉಪಠಾಣೆಯ ಮುಂಭಾಗದಲ್ಲಿ ಹಾದು ಹೋಗುವ ಗೋಣಿಕೊಪ್ಪ - ತಿತಿಮತಿ ರಾಜ್ಯ ಹೆದ್ದಾರಿಯಲ್ಲಿ ಸಾಕ್ಷಿ 1 ರವಿ ರವರು ತಮ್ಮ ಭಾಪ್ತು ಕೆಎ.12.ಸಿ.3821 ರ ಆಟೋ ರಿಕ್ಷಾವನ್ನು ಚಾಲನೆ ಮಾಡಿಕೊಂಡು ತಿತಿಮತಿ ಕಡೆಯಿಂದ ಕಾರೆಕಂಡಿಯಲ್ಲಿರುವ ತಮ್ಮ ಮನೆಗೆ ತೆರಳುತ್ತಿರುವಾಗ, ಸಾಕ್ಷಿ 2 ಹರ್ಷದ್ ರವರು ಆಟೋ ರಿಕ್ಷಾದ ಹಿಂಬದಿಯಲ್ಲಿ ಸಾಕ್ಷಿ 3 ನೂರ್ ಆಯಿಷ ರವರನ್ನು ತಮ್ಮ ಭಾಪ್ತು ಕೆಎ.63.ಎಂ.9547ರ ಬ್ರೀಜಾ ಕಾರಿನಲ್ಲಿ ವಿರಾಜಪೇಟೆಯಿಂದ ಮೈಸೂರು ಕಡೆಗೆ ತೆರಳುತ್ತಿರುವಾಗ, ಆರೋಪಿಯಾದ ನೀವು ತಮ್ಮ ಭಾಪ್ತು ಕೆಎ.01.ಎಮ್ಎ.4504 ರ ಮಾರುತಿ ಆಲ್ಟೋ ಕಾರನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು 1ನೇ ಸಾಕ್ಷಿರವರು ಚಾಲನೆ ಮಾಡುತ್ತಿದ್ದ ಆಟೋ ರಿಕ್ಷಾಕ್ಕೆ ಮತ್ತು 2ನೇ ಸಾಕ್ಷಿರವರು ಚಾಲನೆ ಮಾಡುತ್ತಿದ್ದ ಬ್ರೀಜಾ ಕಾರಿಗೆ ಅಪಘಾತ ಪಡಿಸಿರುತ್ತೀರಿ ಎಂಬುದಾಗಿರುತ್ತದೆ. ಆ ಕಾರಣ ಬಿ.ಎನ್.ಎಸ್ ಕಲಂ 281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ**,** ಮೇಲೆ ಹೇಳಲಾದ ದಿನ**,** ಸ್ಥಳ**,** ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ಅಪಘಾತ ಪಡಿಸಿದ ಪರಿಣಾಮ ಸಾಕ್ಷಿ 1 ಮತ್ತು 2 ರವರಿಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ**.** ಆ ಕಾರಣ ಬಿ**.**ಎನ್**.**ಎಸ್ ಕಲಂ 125(ಎ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ**.**

ಮೂರನೆಯದಾಗಿ, ಮೇಲೆ ಹೇಳಲಾದ ದಿನ, ಸ್ಥಳ, ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ಅಪಘಾತ ಪಡಿಸಿದ ಪರಿಣಾಮ ಸಾಕ್ಷಿ 1 ಮತ್ತು 3 ರವರ ಕಣ್ಣಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ**.** ಆ ಕಾರಣ ಬಿ**.**ಎನ್**.**ಎಸ್ ಕಲಂ 125(ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ**.**

ಕೊನೆಯದಾಗಿ, ಮೇಲೆ ಹೇಳಲಾದ ದಿನ, ಸ್ಥಳ, ಸಮಯ ಮತ್ತು ಸಂದರ್ಭದಲ್ಲಿ ಆರೋಪಿಯಾದ ನೀವು ಸದರಿ ಕಾರಿನ ಇನ್ಸೂರೆನ್ಸ್ ಅವದಿಯು ಮುಗಿದು ಹೋಗಿದ್ದರು ನವೀಕರಸದೇ ಆ ದಿನ ಕಾರನ್ನು ಚಾಲನೆ ಮಾಡಿರುತ್ತೀರಿ ಎಂಬುದಾಗಿರುತ್ತದೆ. ಆ ಕಾರಣ ಆರೋಪಿಯಾದ ನೀವು ಮೋಟಾರು ವಾಹನ ಕಾಯಿದೆ ಕಲಂ 146 ಸಹವಾಚಕ 196 ಮೋಟಾರು ವಾಹನ ಕಾಯ್ದೆ ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಪ್ರಶ್ನೆ 1: ನಿಮಗೆ ಓದಿ ಹೇಳಲಾದ ಆರೋಪವನ್ನು ಅರ್ಥಮಾಡಿಕೊಂಡಿದ್ದೀರಾ?

ಉತ್ತರ :ಅರ್ಥವಾಯಿತು.

ಪ್ರಶ್ನೆ 2: ನಿಮ್ಮ ಮೇಲೆ ಹೊರಿಸಲಾದ ಆರೋಪವನ್ನು ಒಪ್ಪಿಕೊಳ್ಳುತ್ತೀರಾ ಅಥವಾ ವಿಚಾರಣೆಯಾಗಲೇಬೇಕೆ?

ಉತ್ತರ:ತಪ್ಪಾಯಿತು, ದಂಡ ಕಟ್ಟುತ್ತೇನೆ.

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಅವರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ**.**

ಸ್ಥಳಃ ಪೊನ್ನಂಪೇಟೆ,
ದಿಃ-02-06-2026

Sd/-
**ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ**
**ಪೊನ್ನಂಪೇಟೆ.**